ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2023 ದಿನಾಂಕ: 04-01-2024

ಪತ್ರಿಕಾ ಪ್ರಕಟಣೆ

**ಪಿಜಿಸಿಇಟಿ-2023 – ವೈದ್ಯಕೀಯ ತಪಾಸಣೆ ಗೈರು ಹಾಜರಾದ ಅಭ್ಯರ್ಥಿಗಳಿಗೆ – 08-01-2024**

ದಿನಾಂಕ **16-11-2023** ರಂದು ಪಿಜಿಸಿಇಟಿ-2023 ರ ವಿಕಲಚೇತನ ಅಭ್ಯರ್ಥಿಗಳಿಗೆ ಅಂಗವಿಕಲತೆ ಅರ್ಹತೆಯನ್ನು ಪರೀಕ್ಷಿಸಲು ನಡೆಸಲಾದ ವೈದ್ಯಕೀಯ ತಪಾಸಣೆಗೆ ಗೈರು ಹಾಜರಾದ ಅಭ್ಯರ್ಥಿಗಳು 08-01-2024 ರಂದು ಬೆಳಿಗ್ಗೆ 10.00 ಗಂಟೆಗೆ **ಬೆಂಗಳೂರಿನ ಕ.ಪ.ಪ್ರಾ.ದ ಕಚೇರಿಯಲ್ಲಿ ವೈದ್ಯಕೀಯ ಪರೀಕ್ಷೆಗೆ ಹಾಜರಾಗಲು ಮತ್ತೊಂದು ಅವಕಾಶವನ್ನು ನೀಡಲಾಗಿದೆ.**

**ವೈದ್ಯಕೀಯ ಪರೀಕ್ಷೆಗೆ ಅಭ್ಯರ್ಥಿಗಳು ಕಡ್ಡಾಯವಾಗಿ ಈ ಕೆಳಗಿನ ದಾಖಲೆಗಳನ್ನು ಸಲ್ಲಿಸಬೇಕು.**

1. ಪಿಜಿಸಿಇಟಿ-2023ಕ್ಕೆ ಭರ್ತಿ ಮಾಡಿ ಅಂತಿಮವಾಗಿ ಸಲ್ಲಿಸಿರುವ ಪ್ರತಿ.
2. ಪಿಜಿಸಿಇಟಿ-2023 ರ ಮೂಲ ಪ್ರವೇಶ ಪತ್ರ
3. ಮಾನ್ಯತೆ ಇರುವ ಅಭ್ಯರ್ಥಿಯ ಭಾವಚಿತ್ರವುಳ್ಳ ಯಾವುದಾದರು ಒಂದು ಗುರುತಿನ ಚೀಟಿ (ಡ್ರೈವಿಂಗ್ ಲೈಸೆನ್ಸ್ / ಪಾಸ್‌ಪೋರ್ಟ್ / ಆಧಾರ್ ಕಾರ್ಡ್ / ಪಾನ್ ಕಾರ್ಡ್ / ಚುನಾವಣಾ ಗುರುತಿನ ಚೀಟಿ)
4. ಕರ್ನಾಟಕ ರಾಜ್ಯದಲ್ಲಿನ ಯಾವುದೇ ಸರ್ಕಾರಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ, ಸಂಬಂಧಪಟ್ಟ ವಿಕಲತೆಯ ಕ್ಷೇತ್ರದಲ್ಲಿ ಸಕ್ಷಮರಾದ ವೈದ್ಯರು ನೀಡಿರುವ ವೈದ್ಯಕೀಯ ಪ್ರಮಾಣಪತ್ರ
5. ಕಿವುಡುತನದ ಸಮಸ್ಯೆಯಿಂದ ಬಳಲುತ್ತಿರುವ ವಿದ್ಯಾರ್ಥಿಗಳು, ಕಡ್ಡಾಯವಾಗಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ, ಮೈಸೂರು/ ನಿಮ್ಹಾನ್ಸ್, ಬೆಂಗಳೂರು/ ಮಣಿಪಾಲ್ ಆಸ್ಪತ್ರೆ/ ಸರ್ಕಾರಿ ವಾಕ್ ಮತ್ತು ಶ್ರವಣ ಸಂಸ್ಥೆ, ಲಿಂಗರಾಜಪುರಂ, ಬೆಂಗಳೂರು, ಇಲ್ಲಿಂದ ಪಡೆದ ಬಿಎಸ್‌ಇಆರ್ (ಬ್ರೈನ್ ಸ್ಟೆಮ್ ಎವೋಕ್ಡ್ ರೆಸ್ಪಾನ್ಸ್) ಇತ್ತೀಚಿನ PTA + BERA Audiometry report ಶ್ರವಣಮಾಪನ ವರದಿ.

ಕಾರ್ಯನಿರ್ವಾಹಕ ನಿರ್ದೇಶಕರು.

ವೈದ್ಯಕೀಯ ತಪಾಸಣೆ: ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು

ಸಮಯ:- ಬೆಳಿಗ್ಗೆ 10.00 ರಿಂದ (ವರದಿ ಮಾಡಿಕೊಳ್ಳುವ ಸಮಯ: ಬೆಳಿಗ್ಗೆ 9.30)

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in